# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊಳೇನರಸೀಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ
ಮಹಾಯೋಜನೆ (ಪರಿಷ್ಕೃತ -1)ಗೆ ಸರ್ಕಾರದ ಅಂತಿಮ
ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ೧)ಸರ್ಕಾರದ ಆದೇಶ ಸಂ.ನಅಇ 212 ಮೈಅಪ್ರಾ 2006
ಬೆಂಗಳೂರು ದಿ:8-6-2006.
೨)ಹೊಳೆನರಿಸೀಪುರ ಪುರಸಭಾ ಯೋಜನಾ ಪ್ರಾಧಿಕಾರದ ಪತ್ರ
ಸಂ.ಮಯೋಪ್ರಾ:ಹೊ.ಸ.ಪುರ:ಮಾಪ್ಲಾ(ಪ-1):08-09
ದಿ:14-07-2008.
3)ನಗರ ಯೋಜನಾ ನಿರ್ದೇಶಕರ ಕಾರ್ಯಾಲಯದ ಏಕ ಕಡತ
ಸಂ.ನಯೋ(20):ಹೊ.ನ.ಪುರ:ಮಾಪ್ಲಾ(ಪ-1):24/6:06.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಹೊಳೆನರಸೀಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಹೊಳೆನರಸೀಪುರ ಪುರಸಭಾ ಯೋಜನಾ ಪ್ರಾಧಿಕಾರವು ಹೊಳೆನರಸೀಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ-1)ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆ (ಪರಿಷ್ಕೃತ-1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಹೊಳೆನರಸೀಪುರ ಪಟ್ಟಣದ ಜನಸಂಖ್ಯೆಯು 2021ರಲ್ಲಿ 65,000ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾಯೋಜನೆಯನ್ನು (ಪರಿಷ್ಕೃತ-1) ತಯಾರಿಸಲಾಗಿದೆ. ಹೊಳೆನರಸೀಪುರ ಸ್ಥಳೀಯ ಯೋಜನಾ ಪ್ರದೇಶದ 780 ಹೆಕ್ಟೇರ್ ಪ್ರದೇಶದಲ್ಲಿ 550.94 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 550.94 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 265.28 ಹೆಕ್ಟೇರ್ (ಶೇ.48.15), ವಾಣಿಜ್ಯಕ್ಕಾಗಿ 25.91 ಹೆಕ್ಟೇರ್ (ಶೇ.04.70), ಕೈಗಾರಿಕೆಗಾಗಿ 24.71 ಹೆಕ್ಟೇರ್ (ಶೇ.04.48), ಸಾರ್ವಜನಿಕ:ಅರೆ ಸಾರ್ವಜನಿಕ ವಲಯಕ್ಕಾಗಿ 28.84 ಹೆಕ್ಟೇರ್ (ಶೇ.5.23), ನಾಗರೀಕ ಸೌಲಭ್ಯಕ್ಕಾಗಿ 02.07 ಹೆಕ್ಟೇರ್ (ಶೇ.00.38), ಉದ್ಯಾನವನ:ಬಯಲು ಜಾಗಗಾಗಿ 60.77 ಹೆಕ್ಟೇರ್ (ಶೇ.11.03), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 143.36 ಹೆಕ್ಟೇರ್ (ಶೇ.26.03) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆಯನ್ನು (ಪರಿಷ್ಕೃತ-1) ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ

ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ:ನಅಇ 490ಮೈಅಪ್ರಾ2008,ಬೆಂಗಳೂರು,ದಿನಾಂಕ:23-9-2008

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹೊಳೆನರಸೀಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಗನೆಗೆ (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಅಂತಿಯ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಬಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2. ಅಧ್ಯಕ್ಷರು, ಹೊಳೆನರಸೀಪುರ ಪುರಸಭಾ ಯೋಜನಾ ಪ್ರಾಧಿಕಾರ
3. ಕರ್ನಾಟಕ ರಾಜ್ಯ ಪತ್ರ
4. ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು